ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಮುಖ್ಯ ಅಭಿಯಂತರವರ ಕಛೇರಿ, ದಾಸರಹಳ್ಳಿ ವಲಯ,
ಎಂ.ಇ.ಐ.ಬಡಾವಣೆ, ಬಾಗಲಗುಂಟೆ, ಹೆಸರಘಟ್ಟ ಮುಖ್ಯರಸ್ತೆ, ಬೆಂಗಳೂರು –560073.

ನಂ: ಬಿಬಿಎಂಪಿ/ಮು.ಅ/ದಾವ/ತಾ.ಮ/171/2017–18 ದಿನಾಂಕ: 26/09/2017

ತಾಂತ್ರಿಕ ಮಂಜೂರಾತಿ

ವಿಷಯ: "Improvements to cement concrete roads at Bagalagunte village in Bagalagunte in ward no. 14" ಕಾಮಗಾರಿಯ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ: ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರ ಆಡಳಿತಾತ್ಮಕ ಅನುಮೋದನೆ ಸಂಖ್ಯೆ: ಕಾ.ಪಾ.ಅ/ದಾ.ವಿ/ಆ.ಮ/135/2017–18, ದಿನಾಂಕ:

****

ಪ್ರಸ್ತಾವನೆ:–

ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರು ಮೇಲ್ಕಂಡ ಕಾಮಗಾರಿಯ ಅಂದಾಜು ಪಟ್ಟಿಯನ್ನು ರೂ. 50.00 ಲಕ್ಷಗಳ (ರೂಪಾಯಿ ಐವತ್ತು ಲಕ್ಷಗಳು ಮಾತ್ರ) ಮೊತ್ತಕ್ಕೆ ತಯಾರಿಸಿ ತಾಂತ್ರಿಕ ಮಂಜೂರಾತಿ ಕೋರಿದ್ದು, ಉಲ್ಲೇಖಿತ ಪತ್ರದಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, "Improvements to cement concrete roads at Bagalagunte village in Bagalagunte in ward no. 14" ಕಾಮಗಾರಿಯ ಅಂದಾಜು ಪಟ್ಟಿಯನ್ನು ರೂ. 50.00 ಲಕ್ಷಗಳ (ರೂಪಾಯಿ ಐವತ್ತು ಲಕ್ಷಗಳು ಮಾತ್ರ) ಮೊತ್ತಕ್ಕೆ ತಯಾರಿಸಿ ಸಲ್ಲಿಸಿದ್ದು, ಈ ಅಂದಾಜು ಪಟ್ಟಿಗೆ ಕೆಳಕಂಡ ತಾಂತ್ರಿಕ ನಿಬಂಧನೆಗಳಿಗೆ ಒಳಪಟ್ಟು ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಈ ತಾಂತ್ರಿಕ ಮಂಜೂರಾತಿಯನ್ನು ಮುಖ್ಯ ಅಭಿಯಂತರವರ ತಾಂತ್ರಿಕ ಮಂಜೂರಾತಿ ಅನುಮೋದನೆ ಪುಸ್ತಕದ ಪುಟ ಸಂಖ್ಯೆ: 29 ಕ್ರಮ ಸಂಖ್ಯೆ: 171 ರಲ್ಲಿ ನೊಂದಾಯಿಸಲಾಗಿದೆ.

ತಾಂತ್ರಿಕ ನಿಬಂಧನೆಗಳು:

1. ಅಂದಾಜಿನಲ್ಲಿ ಅಳವಡಿಸಿರುವ ಇಡಿಗಂಟು (Lumpsum) ರೂಪದಲ್ಲಿ ಒದಗಿಸಲಾದ ಮೊತ್ತಗಳಿಗೆ ವಿವರವಾದ ಅಂದಾಜುಗಳನ್ನು ಸಿದ್ದಪಡಿಸಿ, ಕೆಲಸ ಆರಂಭಿಸುವ ಮುನ್ನ ಸಕ್ಷಮ ಅಧಿಕಾರಿಗಳಿಂದ ಅನುಮೋದನೆ ಪಡೆಯತಕ್ಕದ್ದು.
2. ಕೆಲಸ ಪ್ರಾರಂಭಿಸುವ ಮುನ್ನ ಕಾಮಗಾರಿ ನಡೆಯುವ ಸ್ಥಳವು ವಿವಾದಗಳಿಂದ ಮುಕ್ತವಾಗಿದೆಯೆಂದು ಪರಿಶೀಲಿಸತಕ್ಕದ್ದು.
3. ರಸ್ತೆ ಕಾಮಗಾರಿಗೆ ಸಂಬಂಧಪಟ್ಟಂತೆ ರಸ್ತೆ ಇತಿಹಾಸ ವಹಿಯಲ್ಲಿ ದಾಖಲಿಸತಕ್ಕದ್ದು. (Road History).
4. ಕಾಮಗಾರಿಯನ್ನು ಮೌಲ್ಯ ಪ್ರಮಾಣ ವಿವರಣೆಯ (Standard Specifications) ಪ್ರಕಾರ ನಿರ್ವಹಿಸತಕ್ಕದ್ದು.

ಮುಖ್ಯ ಅಭಿಯಂತರರು
ದಾಸರಹಳ್ಳಿ ವಲಯ

ಪ್ರತಿಯನ್ನು:–

1. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಸಹಾಯಕ ಹಣಕಾಸು ನಿಯಂತ್ರಕರು, ದಾಸರಹಳ್ಳಿ ವಲಯ ರವರ ಗಮನಕ್ಕೆ.
3. ಕಛೇರಿ ಕಡತಕ್ಕೆ.

Scanned by CamScanner

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಾಸರಹಳ್ಳಿ ವಿಭಾಗ, ದಾಸರಹಳ್ಳಿ ವಲಯ,

ಎಂ.ಇ.ಐ.ಬಡಾವಣೆ, ಬಾಗಲಗುಂಟೆ, ಹೆಸರಘಟ್ಟ ಮುಖ್ಯರಸ್ತೆ, ಬೆಂಗಳೂರು -560073.

ಸಂ:ಬಿಬಿಎಂಪಿ/ಕಾ.ಪಾ.ಅ/ದಾ.ವಿ/ಆ.ಮ/135/2017-18

ಕಾರ್ಯಪಾಲಕ ಅಭಿಯಂತರವರ ಕಛೇರಿ,
ದಾಸರಹಳ್ಳಿ ವಿಭಾಗ,
ದಿನಾಂಕ: 26.9.17

ಆಡಳಿತಾತ್ಮಕ ಅನುಮೋದನೆ.

ಕಾಮಗಾರಿಯ ಹೆಸರು:- Improvements to cement concrete roads at Bagalagunte village in Bagalagunte in ward no. 14

ಕಾಮಗಾರಿ ಸಂಕೇತ ಉಲ್ಲೇಖ ಸಂಖ್ಯೆ:- ಅಂದಾಜು ಮೊತ್ತ : 50.00 ಲಕ್ಷಗಳು P-Code: 3111 SFC 014-18-000025

1 ಮಾನ್ಯ ಆಯುಕ್ತರವರು ನೀಡಿರುವ ಅಧಿಕಾರ ಪ್ರತ್ಯಾಯೋಜನೆ ಕಛೇರಿ ಆದೇಶ (ತಿದ್ದುಪಡಿ ಅಧಿಕಾರ ಪ್ರತ್ಯಾಯೋಜನೆ ನಡವಳಿಗಳು) ಪತ್ರ ಸಂಖ್ಯೆ:ಬಿ12(1) ಪಿಆರ್/394/16-17, ದಿ:05.05.2016.

2 ಮಾನ್ಯ ಜಂಟಿ ಆಯುಕ್ತರು(ದಾವ)ರವರ ಕಂಡಿಕೆ ರಲ್ಲಿ ಅನುಮೋದನೆ ನೀಡಿರುತ್ತಾರೆ

* * * * * * * * *

ಈ ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಶೆಟ್ಟಿಹಳ್ಳಿ/ದಾಸರಹಳ್ಳಿ/ಪೀ.ಕೈ.ಪ್ರ/ಹೆಗ್ಗನಹಳ್ಳಿ ಉಪ ವಿಭಾಗರವರು 2016-17ನೇ ಸಾಲಿನ ದರ ಪಟ್ಟಿಯಂತೆ ಅಂದಾಜು ಪಟ್ಟಿ ತಯಾರಿಸಿ ಆಡಳಿತಾತ್ಮಕ ಅನುಮೋದನೆಯನ್ನು ಕೋರಿರುವ ಮೇರೆಗೆ ಉಲ್ಲೇಖ 1 ಮತ್ತು 2 ರ ರೀತ್ಯಾ ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ.50.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಮತ್ತು ಆಡಳಿತಾತ್ಮಕ ಅನುಮೋದನೆಯ ಪುಸ್ತಕದ ಪುಟ ಸಂಖ್ಯೆ: 73 ಕ್ರಮ ಸಂಖ್ಯೆ: 185 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1 ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು

2 ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಶನ್ ಕರೆದು ಅನುಮೊದನೆ ಪಡೆಯುವುದು.

3 ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.

4 ರಸ್ತೆ ಇತಿಹಾಸ ಪುಸ್ತಕದಲ್ಲಿ ಸದರಿ ಕಾಮಗಾರಿಯಲ್ಲಿನ ವಿವಿಧ ಕೆಲಸಗಳ ವಿವರಗಳನ್ನು ನಮೂದಿಸುವುದು.

26/9/17
ಕಾರ್ಯಪಾಲಕ ಅಭಿಯಂತರರು,
ದಾಸರಹಳ್ಳಿ ವಿಭಾಗ,
ಬಿಬಿಎಂಪಿ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ:-

1 ಮುಖ್ಯ ಅಭಿಯಂತರರು, ದಾಸರಹಳ್ಳಿ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ದಾಸರಹಳ್ಳಿ ವಲಯ ಬೆಂಗಳೂರು.

2 ಸಹಾಯಕ ಹಣಕಾಸು ನಿಯಂತ್ರಕರು, ದಾಸರಹಳ್ಳಿ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.

3 ಕಛೇರಿ ಪ್ರತಿ.

Scanned by CamScanner